# ಕರ್ನಾಟಕ ಸರ್ಕಾರ

ಸಂ:ಗ್ರಾಅಪ/21/ಗ.ಕೋಶ/2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:20.08.2018

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಬಹುಮಹಡಿಗಳ ಕಟ್ಟಡ
ಬೆಂಗಳೂರು.

ಇವರಿಗೆ:
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

ಮಾನ್ಯರೇ,

ವಿಷಯ: ಪಂಚತಂತ್ರ ತಂತ್ರಾಂಶದಲ್ಲಿ ಗ್ರಾಮ ಪಂಚಾಯತಿಗಳ ಬೇಡಿಕೆ, ವಸೂಲಾತಿ ಮತ್ತು ಬಾಕಿಯನ್ನು update ಮಾಡುವ ಬಗ್ಗೆ.

*****

ಗ್ರಾಮ ಪಂಚಾಯತಿಗಳ ಬೇಡಿಕೆ ವಹಿಯಲ್ಲಿರುವ ಆಸ್ತಿಗಳ ಬೇಡಿಕೆ, ವಸೂಲಾತಿ ಮತ್ತು ಬಾಕಿ ಮಾಹಿತಿಗೂ ಪಂಚತಂತ್ರ ತಂತ್ರಾಂಶದಲ್ಲಿ ನಮೂದಿಸಿರುವ ಆಸ್ತಿಗಳ ಬೇಡಿಕೆ, ವಸೂಲಾತಿ ಮತ್ತು ಬಾಕಿಯ ಮಾಹಿತಿಗೆ ಬಹಳಷ್ಟು ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಗ್ರಾಮ ಪಂಚಾಯತಿಯ ಬೇಡಿಕೆ, ವಸೂಲಾತಿ ಮತ್ತು ಬಾಕಿಯನ್ನು update ಮಾಡಲು ಪಂಚತಂತ್ರ ತಂತ್ರಾಂಶದಲ್ಲಿ ಬಹಳಷ್ಟು ಬಾರಿ option ನ್ನು ನೀಡಿ update ಮಾಡಲು ನಿರ್ದೇಶನ ನೀಡಿದ್ದರೂ ಸಹ ಗ್ರಾಮ ಪಂಚಾಯತಿಯವರು ಸದರಿ ಮಾಹಿತಿಯನ್ನು ಅಳವಡಿಸದೇ ಇರುವುದು ವಿಷಾದನೀಯ.

ಪ್ರಸ್ತುತ ಗ್ರಾಮ ಪಂಚಾಯತಿಗಳಲ್ಲಿ ಸಾರ್ವಜನಿಕರ ತೆರಿಗೆಯನ್ನು online ಮೂಲಕ ಪಾವತಿಸಲು ಅನುಕೂಲವಾಗುವಂತೆ ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲು ಸರ್ಕಾರವು ಉದ್ದೇಶಿಸಿದೆ. ಆದುದರಿಂದ ಗ್ರಾಮ ಪಂಚಾಯತಿಯವರು ಕಡ್ಡಾಯವಾಗಿ ಪಂಚತಂತ್ರ ತಂತ್ರಾಂಶದಲ್ಲಿ ಬೇಡಿಕೆ ವಸೂಲಾತಿ ಮತ್ತು ಬಾಕಿಯನ್ನು update ಮಾಡಬೇಕಾಗಿ ಈ ಮೂಲಕ ನಿರ್ದೇಶಿಸಿದೆ.

ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೇಲುಸ್ತುವಾರಿಯಲ್ಲಿ ಎಲ್ಲಾ ಗ್ರಾಮ ಪಂಚಾಯತಿಯವರು ಗ್ರಾಮ ಪಂಚಾಯತಿಯ ಬೇಡಿಕೆ ವಹಿಯಲ್ಲಿರುವಂತೆ ಬೇಡಿಕೆ, ವಸೂಲಾತಿ ಮತ್ತು ಬಾಕಿಯ ಮಾಹಿತಿಯನ್ನು ಪಂಚತಂತ್ರ ತಂತ್ರಾಂಶದಲ್ಲಿ ನಮೂದು ಮಾಡಿಸುವುದು.

....2

ಜಿಲ್ಲಾ ಹಂತದಲ್ಲಿ ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿಗಳು, ಜಿಲ್ಲಾ ಯೋಜನಾ ವ್ಯವಸ್ಥಾಪಕರು, ಗ್ರಾಮ ಪಂಚಾಯತಿಯವರು ಬೇಡಿಕೆ ವಸೂಲಾತಿ ಮತ್ತು ಬಾಕಿಯ ವಿವರವನ್ನು ಕಡ್ಡಾಯವಾಗಿ update ಮಾಡುವ ಪ್ರಕ್ರಿಯೆಯನ್ನು ಮೇಲ್ವಿಚಾರಣೆ ಮಾಡುವುದು.

ತಮ್ಮ ವಿಶ್ವಾಸಿ,

(ಎನ್.ಕೃಷ್ಣಪ್ಪ ಕೋಡಿಪಾಳ್ಯ)
ನಿರ್ದೇಶಕರು(ಇ-ಆಡಳಿತ) (ಪ್ರ) ಹಾಗೂ
ಪ/ನಿ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

1. ನಿರ್ದೇಶಕರು (ಪಂ.ರಾಜ್-1), ಗ್ರಾಅಪ ಇಲಾಖೆ, ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಉಪ ಕಾರ್ಯದರ್ಶಿಗಳು.
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಲೆಕ್ಕಾಧಿಕಾರಿಗಳು.
4. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
5. ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳ ಅಭಿವೃದ್ಧಿ ಅಧಿಕಾರಿಗಳು-ತಾ.ಪಂ.ನ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ.
6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳು.